ಇ) ಈ ಬಾಂದಾರ ಕಟ್ಟುವುದರಿಂದ, ಮುಳುಗಡೆ ಪ್ರದೇಶದ ಜನರಿಗೆ ಅನುಕೂಲವಾಗುವುದರಿಂದ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ(ಕಂದಾಯ ರಾಜ್ಯ ಸಚಿವರು):

ಅ) ಹೌದು.

ಆ) ಹೌದು, ಮುಖ್ಯ ಅಭಯಂತರರು ನೀರಾವರಿ ನಿಗಮ, ಬೆಳಗಾವಿ ಇವರ ಮೂಲಕ ರೂ. 14.00 ಲಕ್ಷ ವೆಚ್ಚದಲ್ಲಿ ಕಾಮಗಾರಿ ನಿರ್ಮಹಿಸಲು ಪ್ರಸ್ತಾವನೆ ಕಳುಹಿಸಲಾಗಿದೆ.

ಇ) ಮೇಲೆ (ಅ)ದಲ್ಲಿ ನೀಡಿದ ಉತ್ತರದಂತೆ.

ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜಿನ ಕಟ್ಟಡ ನಿರ್ಮಾಣ

1236(1452) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ(ಬೈಲಹೊಂಗಲ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿರುವ ಸರ್ಕಾರಿ ಐ.ಟಿ.ಐ. ಕಾಲೇಜು ಕಟ್ಟಡ ಇಲ್ಲದೆ ಇರುವುದರಿಂದ ಈಗ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ನಡೆಯುತ್ತಿರುವ ಸಂಗತಿ ನಿಜವೇ?

ಆ) ಹಾಗಿದ್ದಲ್ಲಿ, ಕೂಡಲೇ ಐ.ಟಿ.ಐ. ಕಾಲೇಜಿಗೆ ಸ್ವಂತ ಕಟ್ಟಡ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಖಮರುಲ್ ಇಸ್ಲಾಂ(ಕಾರ್ಮಿಕ ಸಚಿವರು):

ಅ) ಹೌದು

ಆ) ಭೂಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಕಡೂರು ತಾಲ್ಲೂಕಿನಲ್ಲಿ ನಬಾರ್ಡ್ ವತಿಯ ಆರ್.ಐ.ಡಿ.ಎಫ್ 1ರಿಂದ 8ರವರೆಗೆ ಕೈಗೊಂಡ ಕಾಮಗಾರಿಗಳು

1237(727) ಶ್ರೀ ಕೃಷ್ಣಮೂರ್ತಿ ಕೆ.ಎಂ (ಕಡೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಆರ್.ಐ.ಡಿ.ಎಫ್ 1 ರಿಂದ 8 ರವರೆಗೆ ಕಡೂರು ತಾಲ್ಲೂಕಿನಲ್ಲಿ ನಬಾರ್ಡ್ ವತಿಯಿಂದ ಎಷ್ಟು ಕಿ.ಮೀ. ಉದ್ದದ ಗ್ರಾಮಾಂತರ ರಸ್ತೆಯ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರೈಸಲಾಗಿದೆ?

ಆ) ನಬಾರ್ಡ್ ಮೂಲಕ ಅಭಿವೃದ್ಧಿಗೊಳಿಸಲಾದ ಗ್ರಾಮಾಂತರ ರಸ್ತೆಯ ನಿರ್ವಹಣೆಯನ್ನು ಯಾವ ಇಲಾಖೆ ನಿರ್ವಹಿಸುತ್ತದೆ?

ಶ್ರೀ ಧರ್ಮಸಿಂಗ್(ಲೋಕೋಪಯೋಗಿ ಸಚಿವರು):

ಅ) ಕಡೂರು ತಾಲ್ಲೂಕಿನಲ್ಲಿ ಆರ್ಐಡಿಎಫ್-2 ರಿಂದ 8ರವರೆಗೆ 41.95 ಕಿಮೀ ಉದ್ದದ 5 ಗ್ರಾಮೀಣ ರಸ್ತೆಗಳ ಅಭಿವೃದ್ಧಿಯನ್ನು ಕೈಗೊಳ್ಳಲಾಗಿದ್ದು, 30.85 ಕಿಮೀ ರಸ್ತೆಯ ಅಭಿವೃದ್ಧಿಯನ್ನು ಪೂರ್ಣಗೊಳಿಸಲಾಗಿದೆ.

ಆ) ನಬಾರ್ಡ್ ಯೋಜನೆಯಡಿ ಅಭಿವೃದ್ಧಿಪಡಿಸಲಾದ ರಸ್ತೆಗಳನ್ನು ಒಂದು ವರ್ಷದ ಅವಧಿಯವರೆಗೆ ಸಂಬಂಧಪಟ್ಟ ಗುತ್ತಿಗೆದಾರರು ನಿರ್ವಹಿಸುವರು. ತದನಂತರ ಈ ರಸ್ತೆಗಳು

ಗ್ರಾಮೀಣ ರಸ್ತೆಗಳಾಗಿಯೇ ಮುಂದುವರೆಯುವುದರಿಂದ ಇವುಗಳನ್ನು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನಿರ್ವಹಿಸುತ್ತದೆ.

ತುರುವೇಕೆರೆ ನಗರದಲ್ಲಿ ಕ್ರೀಡಾಂಗಣ ನಿರ್ಮಾಣ

1238(1920)) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ(ಅಣ್ಣಯ್ಯ) (ತುರುವೇಕೆರೆ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತುರುವೇಕೆರೆ ನಗರದಲ್ಲಿ ಕ್ರೀಡಾಂಗಣ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ ತೆಗೆದುಕೊಂಡ ಕ್ರಮವೇನು?

ಇ) ಯಾವಾಗ ನಿರ್ಮಾಣ ಪ್ರಾರಂಭ ಮಾಡಲಾಗುವುದು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಬಂದಿದೆ.

ಆ) ಸೂಕ್ತ ನಿವೇಶನವನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ನಿವೇಶನವನ್ನು ಪಡೆದ ನಂತರ.

ತುರುವೇಕೆರೆ ತಾ।। ಬಳ್ಳೇಕಟ್ಟೆ ಗ್ರಾಮದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ನಿರ್ಮಾಣ

1240(1922) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ(ಅಣ್ಣಯ್ಯ) (ತುರುವೇಕೆರೆ)) : ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ತುರುವೇಕೆರೆ ತಾಲ್ಲೂಕು ಬಳ್ಳೇಕಟ್ಟೆ ಗ್ರಾಮದಲ್ಲಿ (ಕಸಬ ಹೋಬಳಿ) ಬಸವೇಶ್ವರ ದೇವಸ್ಥಾನ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2) ಹಾಗಿದ್ದಲ್ಲಿ, ಗ್ರಾಮಸ್ಥರು ಸರ್ಕಾರದ ನೆರವಿಗೆ ಮನವಿ ಮಾಡಿ ದಾಖಲಾತಿ ನೀಡಿರುವುದು ನಿಜವೇ?

3) ಇದುವರೆವಿಗೂ ಹಣ ಮಂಜೂರು ಮಾಡದಿರಲು ಕಾರಣವೇನು?

4) ಈ ವರ್ಷದ ಆಯವ್ಯಯದಲ್ಲಿ ಹಣ ಕೊಡಲಾಗುವುದೇ? (ವಿವರ ಕೊಡುವುದು)

ಶ್ರೀಮತಿ ಸುಮಾವಸಂತ್ (ಮುಜರಾಯಿ ರಾಜ್ಯ ಸಚಿವರು):

1) ಹೌದು. ಬಂದಿದೆ.

2) ಹೌದು. ದಿನಾಂಕ 5.3.2001ರಲ್ಲಿ ಗ್ರಾಮಸ್ಥರು ತಾಲ್ಲೂಕು ಕಛೇರಿಗೆ ಮನವಿ ಸಲ್ಲಿಸಿದ್ದು ಪರಿಶೀಲನೆಯಲ್ಲಿದೆ.

3) ಸ್ಥಳೀಯ ಅಧಿಕಾರಿಗಳಿಂದ ಅನುದಾನ ಕೋರಿ ನಿಯಮಾನುಸಾರ ಸರ್ಕಾರಕ್ಕೆ ಪ್ರಸ್ತಾವನೆ ಬಂದಲ್ಲಿ ಅನುದಾನ ಲಭ್ಯತೆಗೆ ಅನುಸಾರವಾಗಿ ಪರಿಶೀಲಿಸಲಾಗುವುದು.

4) ಪ್ರಶ್ನೆ ಸಂಖ್ಯೆ 3ರಲ್ಲಿ ಉತ್ತರ ನೀಡಲಾಗಿದೆ.